# ಡಾಲಿ ಮೆಕ್ಸಿಕೊ ನಂಟು



‘ಬಡವ ರಾಸ್ಕಲ್’ ತಂಡ ಮತ್ತೊಮ್ಮೆ ತೆರೆ ಮೇಲೆ ಸದ್ದು ಮಾಡಲು ಅಣಿಯಾಗಿದೆ. ಡಾಲಿ ಧನಂಜಯ ಹಾಗೂ ಶಂಕರ್ ಗುರು ಕಾಂಬಿನೇಷನ್‌ನಲ್ಲಿ ಮೂಡಿಬರುತ್ತಿರುವ ಎರಡನೇ ಸಿನಿಮಾ ಇದಾಗಿದೆ. ಶಂಕರ್ ಗುರು ನಿರ್ದೇಶಿಸಲಿರುವ ಹೊಸ ಸಿನಿಮಾ ‘ಅಣ್ಣ from Mexico’ ಸೆಟ್ಟೇರಿದ್ದು, ಚಿತ್ರದ ಮುಹೂರ್ತ ಇತ್ತೀಚೆಗೆ ನಡೆದಿದೆ.

2021ರಲ್ಲಿ ತೆರೆಕಂಡ ಧನಂಜಯ್ ನಟನೆಯ ‘ಬಡವ ರಾಸ್ಕಲ್’ ಚಿತ್ರ ಪ್ರೇಕ್ಷಕರ ಮನ ಗೆಲ್ಲುವಲ್ಲಿ ಯಶಸ್ವಿಯಾಗಿತ್ತು. ಆ ಸಿನಿಮಾವನ್ನು ಶಂಕರ್ ಅವರೇ ನಿರ್ದೇಶಿಸಿದ್ದರು. ಇದೀಗ ಮತ್ತೊಮ್ಮೆ ಡಾಲಿ–ಶಂಕರ್ ಜೋಡಿ ತೆರೆ ಮೇಲೆ ಒಂದಾಗಲಿದ್ದು, ಸಿನಿಮಾ ಬಗ್ಗೆ ಭರವಸೆ ಮೂಡಿಸಿದೆ.

ಆ್ಯಕ್ಷನ್ ಫ್ಯಾಮಿಲಿ ಎಂಟರ್‌ಟೈನರ್ ಚಿತ್ರ ಇದಾಗಿದ್ದು, ಇದೇ ತಿಂಗಳಿನಿಂದ ಚಿತ್ರೀಕರಣ ಆರಂಭಿಸಲಾಗುತ್ತಿದೆ. ಮೆಕ್ಸಿಕೊ ಸೇರಿದಂತೆ ಹಲವೆಡೆ ಚಿತ್ರದ ಚಿತ್ರೀಕರಣ ನಡೆಯಲಿದೆ. ದಿ ರಾಯಲ ಸ್ಟುಡಿಯೋಸ್ ಅಡಿಯಲ್ಲಿ ಸತ್ಯ ರಾಯಲ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಸದ್ಯ ‘ಉತ್ತರಕಾಂಡ’ ಸಿನಿಮಾದ ಜೊತೆಗೆ ‘ಅಣ್ಣ from Mexico‘ದಲ್ಲೂ ಡಾಲಿ ತೊಡಗಿಸಿಕೊಂಡಿದ್ದಾರೆ.

# ಕಿರಿಕ್ ಅಲ್ಲ ಈ ಬ್ಯಾಚುಲರ್ ಪಾರ್ಟಿ




ರಕ್ಷಿತ್ ಶೆಟ್ಟಿ ನಟನೆಯ ‘ಕಿರಿಕ್ ಪಾರ್ಟಿ’ ಸಿನಿಮಾ ತೆರೆಕಂಡು ಏಳು ವರ್ಷಗಳಾಗಿವೆ. ಇದೇ ಹೊತ್ತಿನಲ್ಲಿ ಇದೇ ತಂಡದ ಮತ್ತೊಂದು ಸಿನಿಮಾ ‘ಬ್ಯಾಚುಲರ್ ಪಾರ್ಟಿ’ ತೆರೆಗೆ ಬರುವ ಸಿದ್ಧತೆಯಲ್ಲಿದೆ.

ಜ. 26ರಂದು ‘ಬ್ಯಾಚುಲರ್ ಪಾರ್ಟಿ’ ತೆರೆಗೆ ಬರುತ್ತಿದೆ. ರಕ್ಷಿತ್ ಶೆಟ್ಟಿ ನಿರ್ಮಾಣದ, ಅಭಿಜಿತ್ ಮಹೇಶ್ ಆ್ಯಕ್ಷನ್ ಕಟ್ ಹೇಳಿರುವ ಈ ಸಿನಿಮಾದಲ್ಲಿ ಭರ್ಜರಿ ಮನರಂಜನೆ ನೀಡುವ ಮುನ್ಸೂಚನೆಯನ್ನೂ ಸಿನಿಮಾ ಟೀಸರ್ ಬಿಡುಗಡೆ ಮೂಲಕ ನೀಡಲಾಗಿದೆ.

‘ಕಿರಿಕ್ ಪಾರ್ಟಿ’ ಸಿನಿಮಾ ಬರವಣಿಗೆಯಲ್ಲಿ ತೊಡಗಿದ್ದ ಅಭಿಜಿತ್ ಮಹೇಶ್ ಈ ಸಿನಿಮಾ ಮೂಲಕ ನಿರ್ದೇಶನಕ್ಕೆ ಇಳಿದಿದ್ದಾರೆ. ಅಚ್ಯುತ್ ಕುಮಾರ್, ದಿಗಂತ್ ಹಾಗೂ ಲೂಸ್ ಮಾದ ಯೋಗಿ, ಸಿರಿ ರವಿಕುಮಾರ್ ಸಿನಿಮಾದಲ್ಲಿ ನಟಿಸಿದ್ದಾರೆ. ಕಾಮಿಡಿ ಜಾನರ್‌ನ ಈ ಸಿನಿಮಾ ತಾಜಾ ಮನರಂಜನೆ ನೀಡಲಿದೆ, ಪ್ರೇಕ್ಷಕರನ್ನು ನಕ್ಕು ನಲಿಸಲಿದೆ ಎಂದು ಚಿತ್ರತಂಡ ಹೇಳಿಕೊಂಡಿದೆ.

ಈ ಸಿನಿಮಾ ಬ್ಯಾಂಕಾಕ್‌ನಲ್ಲಿ ಚಿತ್ರೀಕರಣಗೊಂಡಿದ್ದು, ಅರವಿಂದ್ ಛಾಯಾಗ್ರಹಣ, ಅರ್ಜುನ್ ರಾಮು ಸಂಗೀತ ನಿರ್ದೇಶನವಿದೆ. ಪರಂವ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ರಕ್ಷಿತ್ ಶೆಟ್ಟಿ ಹಾಗೂ ಅಮಿತ್ ಗುಪ್ತ ಜಂಟಿಯಾಗಿ ಈ ಚಿತ್ರವನ್ನು ನಿರ್ಮಿಸಿದ್ದಾರೆ.